ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ಸಂಖ್ಯೆ: ವಾಇ : ಸುಮಪ : ಪ ಪ್ರ : 2014–15 : ಡಿಸೆಂಬರ್ 31 , 2014

ಪತ್ರಿಕಾ ಪ್ರಕಟಣೆ

# ಸುಪ್ರಸಿದ್ಧ ಪತ್ರಕರ್ತ ಬಿ. ಜಿ. ವರ್ಗೀಸ್ ನಿಧನಕ್ಕೆ ಮುಖ್ಯಮಂತ್ರಿ ಸಂತಾಪ

ಬೆಂಗಳೂರು, ಡಿಸೆಂಬರ್ 31 :

ಸುಪ್ರಸಿದ್ಧ ಪತ್ರಕರ್ತ ಶ್ರೀ ಬಿ. ಜಿ. ವರ್ಗೀಸ್ ಅವರ ನಿಧನಕ್ಕೆ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ರಾಷ್ಟ್ರದ ಪ್ರಮುಖ ಪತ್ರಿಕೆಗಳಾದ ದಿ ಟೈಮ್ಸ್ ಆಫ್ ಇಂಡಿಯಾ, ದಿ ಹಿಂದುಸ್ತಾನ್ ಟೈಮ್ಸ್ ಹಾಗೂ ದಿ ಇಂಡಿಯನ್ ಎಕ್ಸ್‌ಪ್ರೆಸ್ ಪತ್ರಿಕೆಗಳ ಸಂಪಾದಕರಾಗಿ ತಮ್ಮ ಗರಡಿಯಲ್ಲಿ ಸಾವಿರಾರು ಪತ್ರಕರ್ತರನ್ನು ಬೆಳೆಸಿದ ಕೀರ್ತಿ ಶ್ರೀ ವರ್ಗೀಸ್ ಅವರಿಗೆ ಸಲ್ಲುತ್ತದೆ. ಅಂದಿನ ಪ್ರಧಾನ ಮಂತ್ರಿ ಇಂದಿರಾ ಗಾಂಧಿ ಅವರ ಪತ್ರಿಕಾ ಸಲಹೆಗಾರರಾಗಿಯೂ ಸೇವೆ ಸಲ್ಲಿಸಿದ್ದ ಶ್ರೀ ವರ್ಗೀಸ್ ಅವರು ರಾಷ್ಟ್ರದ ಗಮನ ಸೆಳೆದಿದ್ದರು. ಅಭಿವ್ಯಕ್ತಿ ಸ್ವಾತಂತ್ರ್ಯದ ಪ್ರತಿಪಾದಕರಾಗಿದ್ದ ಶ್ರೀ ವರ್ಗೀಸ್ ಅವರು ಕೇಂದ್ರ ಸರ್ಕಾರದ ಸ್ವಾಮ್ಯದ ಆಕಾಶವಾಣಿ ಮತ್ತು ದೂರದರ್ಶನಕ್ಕೆ ಸ್ವಾಯತ್ತತೆ ದೊರಕಿಸಿಕೊಡುವಲ್ಲಿ ಮಹತ್ತರ ಪಾತ್ರ ನಿರ್ವಹಿಸಿದ್ದರು ಎಂದು ಶ್ರೀ ಸಿದ್ದರಾಮಯ್ಯ ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

*************

ಡಿ ಪಿ ಎಂ